**All India Radio: Bangalore**
**National Bulletins In Kannada**
**16.08.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

1. ಗಡಿ ಪ್ರದೇಶಗಳಲ್ಲಿ ಅಕ್ರಮ ವಲಸಿಗರ ಸಂಖ್ಯೆ ಹೆಚ್ಚಳವು ರಾಷ್ಟ್ರೀಯ ಭದ್ರತೆಗೆ ಅಪಾಯ- ಪ್ರಧಾನಿ ನರೇಂದ್ರ ಮೋದಿ
2. ಅಲಾಸ್ಕಾದಲ್ಲಿ ನಡೆದ ಡೊನಾಲ್ಡ್ ಟ್ರಂಪ್ - ವ್ಲಾಡಿಮಿರ್ ಪುಟಿನ್ ಮಾತುಕತೆ, ಉಕ್ರೇನ್- ರಷ್ಯಾ ಸಂಘರ್ಷ ಪರಿಹರಿಸಲು ವಿಫಲ
3. ದೇಶಾದ್ಯಂತ ಇಂದು ಶ್ರೀಕೃ? ಜನ್ಮಾ?ಮಿ ಆಚರಣೆ
4. ಇಂದಿನಿಂದ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್-೨೦೨೫ ಆರಂಭ: ಭಾರತ ತಂಡ ಮುನ್ನಡೆಸಲಿರುವ ಮನು ಭಾಕರ್

************

ದೇಶದ ಜನಸಂಖ್ಯೆಗೆ ಬೆದರಿಕೆಯೊಡ್ಡುತ್ತಿರುವ ಅಕ್ರಮ ವಲಸೆಯ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಎಚ್ಚರಿಕೆ ನೀಡಿದ್ದಾರೆ. ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಪ್ರಧಾನಿ, ಅಕ್ರಮ ವಲಸಿಗರಿಂದ ಉಂಟಾಗುವ ಅಪಾಯಗಳಿಂದ ದೇಶವನ್ನು ರಕ್ಷಿಸಲು ಉನ್ನತ-ಶಕ್ತಿಯ ಜನಸಂಖ್ಯಾಶಾಸ್ತ್ರ ಯೋಜನೆಯನ್ನು ಅವರು ಘೋಷಿಸಿದರು. ಒಳನುಸುಳುವವರು ದೇಶದ ಯುವಕರ ಜೀವನೋಪಾಯವನ್ನು ಕಸಿದುಕೊಳ್ಳುತ್ತಿದ್ದಾರೆ. ಅವರು ನಮ್ಮ ಸಹೋದರಿಯರು ಮತ್ತು ಹೆಣ್ಣುಮಕ್ಕಳನ್ನು ಗುರಿಯಾಗಿಸಿಕೊಂಡಿದ್ದಾರೆ. ಅವರು ಆದಿವಾಸಿಗಳನ್ನು ದಾರಿ ತಪ್ಪಿಸುತ್ತಿದ್ದಾರೆ ಮತ್ತು ಭೂಮಿಯನ್ನು ಕಸಿದುಕೊಳ್ಳುತ್ತಿದ್ದಾರೆ. ಇದನ್ನು ಸಹಿಸಲಾಗುವುದಿಲ್ಲ ಎಂದು ಎಚ್ಚರಿಸಿದರು. ಗಡಿ ಪ್ರದೇಶಗಳಲ್ಲಿನ ಜನಸಂಖ್ಯಾ ಹೆಚ್ಚಳ ರಾಷ್ಟ್ರೀಯ ಭದ್ರತೆಗೆ ಅಪಾಯವನ್ನುಂಟು ಮಾಡುತ್ತವೆ

ಎಂದು ಪ್ರಧಾನಿ ಮೋದಿ ಹೇಳಿದರು. ಆಪರೇಷನ್ ಸಿಂದೂರ್‌ನಲ್ಲಿ ಭಾಗಿಯಾಗಿದ್ದ ಧೈರ್ಯಶಾಲಿ ಸೈನಿಕರಿಗೆ ಅವರು ನಮನ ಸಲ್ಲಿಸಿದರು. ಈ ಕಾರ್ಯಾಚರಣೆಯು ದೇಶದ ಸಶಸ್ತ್ರ ಪಡೆಗಳ ಶೌರ್ಯ ಮತ್ತು ನಿಖರತೆಗೆ ಪ್ರಬಲ ಸಾಕ್ಷಿಯಾಗಿದೆ. ದೇಶದ ಧೈರ್ಯಶಾಲಿ ಸೈನಿಕರು ಶತ್ರುಗಳಿಗೆ ಅವರ ಕಲ್ಪನೆಗೂ ಮೀರಿದ ಸೂಕ್ತ ಪ್ರತ್ಯುತ್ತರವನ್ನು ನೀಡಿದರು ಎಂದು ಶ್ಲಾಘಿಸಿದರು. ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ನಡೆಸಿದ ಭೀಕರ ಕೃತ್ಯಕ್ಕೆ ಪ್ರತಿಯೊಬ್ಬ ಭಾರತೀಯನೂ ಕ್ರೋಧಗೊಂಡಿದ್ದಾನೆ ಮತ್ತು ಆಪರೇಷನ್ ಸಿಂದೂರ್ ಅವರ ಕ್ರೋಧದ ಅಭಿವ್ಯಕ್ತಿಯಾಗಿದೆ ಎಂದರು. ರಕ್ತ ಮತ್ತು ನೀರು ಒಟ್ಟಿಗೆ ಹರಿಯಬಾರದು ಎಂದು ಭಾರತ ಈಗ ನಿರ್ಧರಿಸಿದೆ. ಸಿಂಧೂ ಜಲ ಒಪ್ಪಂದವು ಅನ್ಯಾಯಯುತವಾಗಿದೆ ಎಂದು ದೇಶದ ಜನರು ಈಗ ಅರಿತುಕೊಂಡಿದ್ದಾರೆ. ಭಾರತ ಇನ್ನು ಮುಂದೆ ಪರಮಾಣು ಬೆದರಿಕೆಯನ್ನು ಸಹಿಸುವುದಿಲ್ಲ ಎಂದು ಪ್ರಧಾನಿ ಹೇಳಿದರು. ಶತೃಗಳ ಯಾವುದೇ ಪ್ರಯತ್ನವನ್ನು ತಡೆಯಲು ಶಕ್ತಿಶಾಲಿ ಶಸ್ತ್ರಾಸ್ತ್ರ ವ್ಯವಸ್ಥೆಯನ್ನು ರಚಿಸಲು ಭಾರತವು ಮಿಷನ್ ಸುದರ್ಶನ ಚಕ್ರವನ್ನು ಪ್ರಾರಂಭಿಸಲಿದೆ ಎಂದು ಪ್ರಧಾನಿ ಮೋದಿ ತಿಳಿಸಿದರು. ಭಾರತವನ್ನು ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಸರ್ಕಾರ ಕೆಲಸ ಮಾಡುತ್ತಿದೆ. ವಿಕಸಿತ ಭಾರತದ ಅಡಿಪಾಯದಲ್ಲಿ ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಭಾರತವು ಮಿಷನ್ ಮೋಡ್‌ನಲ್ಲಿ ಸೆಮಿಕಂಡಕ್ಟರ್ ವಲಯದಲ್ಲಿ ಕೆಲಸ ಮಾಡುತ್ತಿದೆ. ಆರು ವಿಭಿನ್ನ ಸೆಮಿಕಂಡಕ್ಟರ್ ಘಟಕಗಳು ದೇಶದಲ್ಲಿ ಸ್ಥಾಪನೆಯಾಗುತ್ತಿದ್ದು, ನಾಲ್ಕು ಹೊಸ ಘಟಕಗಳಿಗೆ ಅನುಮೋದನೆ ನೀಡಲಾಗಿದೆ. ಈ ವರ್ಷದ ಅಂತ್ಯದ ವೇಳೆಗೆ, ಮೇಡ್ ಇನ್ ಇಂಡಿಯಾ ಚಿಪ್‌ಗಳು ಮಾರುಕಟ್ಟೆಯಲ್ಲಿ ಲಭ್ಯವಾಗಲಿವೆ ಎಂದು ಪ್ರಧಾನಿ ತಿಳಿಸಿದರು. ದೇಶದ ಯುವಕರಿಗಾಗಿ ಸುಮಾರು ಒಂದು ಲಕ್ಷ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರಧಾನಮಂತ್ರಿ ವಿಕಸಿತ ಭಾರತ ರೋಜ್‌ಗಾರ್ ಯೋಜನೆಯನ್ನು ಜಾರಿಗೆ ತರುವುದಾಗಿ ಪ್ರಧಾನಿ ನರೇಂದ್ರ ಮೋದಿ ಘೋಷಿಸಿದರು. ಈ ಯೋಜನೆಯಡಿಯಲ್ಲಿ ಖಾಸಗಿ ವಲಯದಲ್ಲಿ ಮೊದಲು ಉದ್ಯೋಗ ಪಡೆಯುವ

ಯುವಕರಿಗೆ ಸರ್ಕಾರವು ೧೫ ಸಾವಿರ ರೂಪಾಯಿಗಳನ್ನು ನೀಡಲಿದೆ. ಈ ಯೋಜನೆಯಡಿಯಲ್ಲಿ ಮೂರು ಕೋಟಿ ೫೦ ಲಕ್ಷ ಯುವಕರಿಗೆ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಗುರಿ ಹೊಂದಿದೆ ಎಂದು ಅವರು ಮಾಹಿತಿ ನೀಡಿದರು. ಬಾಹ್ಯಾಕಾಶ ಕ್ಷೇತ್ರದಲ್ಲಿ ದೇಶ ಸಾಧನೆ ಮಾಡುತ್ತಿದ್ದು, ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಹಿಂತಿರುಗಿದ್ದಾರೆ. ಗಗನಯಾನಕ್ಕೆ ಭಾರತ ತಯಾರಿ ನಡೆಸುತ್ತಿದೆ ಮತ್ತು ಸ್ವಂತ ಬಾಹ್ಯಾಕಾಶ ನಿಲ್ದಾಣವನ್ನು ನಿರ್ಮಿಸುವ ಕೆಲಸ ಪ್ರಗತಿಯಲ್ಲಿದೆ. ದೇಶದ ೩೦೦ ಕ್ಕೂ ಹೆಚ್ಚು ನವೋದ್ಯಮಗಳು ಬಾಹ್ಯಾಕಾಶ ವಲಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಹೇಳಿದರು.

************

ಉಕ್ರೇನ್-ರಷ್ಯಾ ಸಂಘರ್ಷವನ್ನು ಪರಿಹರಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವೆ ಅಲಾಸ್ಕಾದಲ್ಲಿ ನಡೆದ ಮಾತುಕತೆಗಳು ಯಾವುದೇ ಒಪ್ಪಂದಕ್ಕೆ ಬರಲಿಲ್ಲ.ಅಲಾಸ್ಕಾದ ಆಂಕಾರೇಜ್‌ನಲ್ಲಿರುವ ಎಲ್ಮೆಂಡಾರ್ಫ್-ರಿಚರ್ಡ್ಸನ್ ಮಿಲಿಟರಿ ನೆಲೆಯಲ್ಲಿ ಸುಮಾರು ಮೂರು ಗಂಟೆಗಳ ಕಾಲ ಶಾಂತಿ ಮಾತುಕತೆ ನಡೆಯಿತು.ಸಭೆಯ ನಂತರ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ತಮ್ಮ ಚರ್ಚೆಯ ಕೇಂದ್ರ ವಿಷಯ ಉಕ್ರೇನ್ ಸಂಘರ್ಷ. ಸಂಘರ್ಷವನ್ನು ಕೊನೆಗೊಳಿಸಲು ತಾವು ಪ್ರಾಮಾಣಿಕವಾಗಿ ಆಸಕ್ತಿ ಹೊಂದಿರುವುದಾಗಿ ಅವರು ಹೇಳಿದರು.ಸಂಘರ್ಷದ ಪ್ರಾಥಮಿಕ ಕಾರಣಗಳನ್ನು ತೊಡೆದುಹಾಕಬೇಕಾಗಿದೆ. ಮಾತುಕತೆಗಳನ್ನು ಉಕ್ರೇನ್ ಮತ್ತು ಯುರೋಪ್ ಹಾಳು ಮಾಡಬಾರದು ಎಂದು ಎಚ್ಚರಿಸಿದರು.ಅಮೆರಿಕ ಮತ್ತು ರಷ್ಯಾ ಮತ್ತಷ್ಟು ಪ್ರಗತಿಗೆ ಉತ್ತಮ ಅವಕಾಶ ಹೊಂದಿದೆ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದರು.

************

ಶ್ರೀಕೃಷ್ಣ ಜನ್ಮೋತ್ಸವವಾದ ಅಂಗವಾಗಿ ಜನ್ಮಾ?ಮಿಯನ್ನು ಇಂದು ದೇಶಾದ್ಯಂತ ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಲಾಗುತ್ತಿದೆ. ಶ್ರೀಕೃಷ್ಣನಿಗೆ ಪ್ರಾರ್ಥನೆ ಸಲ್ಲಿಸಲು ಭಕ್ತರು ದೇವಾಲಯಗಳಿಗೆ ತೆರಳುತ್ತಿದ್ದಾರೆ. ಉತ್ತರ ಪ್ರದೇಶದ ಮಥುರಾ ಮತ್ತು ವೃಂದಾವನವು ಶ್ರೀಕೃಷ್ಣನ ಜನ್ಮ ದಿನವನ್ನು ಆಚರಿಸಲು ಸಂಪೂರ್ಣವಾಗಿ ಸಜ್ಜಾಗಿದೆ. ಶ್ರೀಕೃಷ್ಣನ ಜನ್ಮಸ್ಥಳವಾದ ಮಥುರಾದಲ್ಲಿ, ಬಂಕೆ ಬಿಹಾರಿ ದೇವಸ್ಥಾನ, ಪ್ರೇಮ್ ಮಂದಿರ, ಇಸ್ಕಾನ್ ದೇವಸ್ಥಾನ ಮತ್ತು ಶ್ರೀಕೃಷ್ಣ ಜನ್ಮ ಭೂಮಿ ದೇವಸ್ಥಾನ ಸೇರಿದಂತೆ ಉಡುಪಿಯ ಶ್ರೀಕೃಷ್ಣ ದೇವಾಲಯಗಳನ್ನು ಸುಂದರವಾಗಿ ಅಲಂಕರಿಸಲಾಗಿದೆ. ಬಾಲಕೃಷ್ಣನ ವೇಷದಲ್ಲಿ ಮಕ್ಕಳು ಕಂಗೊಳಿಸಲಿದ್ದಾರೆ.

ಶ್ರೀಕೃಷ್ಣ ಜನ್ಮಾಷ್ಟಮಿಯ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶುಭಾಶಯ ಕೋರಿದ್ದಾರೆ. ಜನ್ಮಾಷ್ಟಮಿಯ ತಮ್ಮ ಸಂದೇಶದಲ್ಲಿ ರಾಷ್ಟ್ರತಿಗಳು, ಇದು ಅತ್ಯಂತ ಸಂತೋ? ಮತ್ತು ಉತ್ಸಾಹದಿಂದ ತುಂಬಿದ ಹಬ್ಬ ಎಂದು ಹೇಳಿದ್ದಾರೆ. ಭಗವಾನ್ ಶ್ರೀಕೃಷ್ಣನ ಜೀವನ ಮತ್ತು ಬೋಧನೆಗಳು ಜನರನ್ನು ಸ್ವಯಂ ಅಭಿವೃದ್ಧಿ ಮತ್ತು ಸ್ವಯಂ ಸಾಕ್ಷಾತ್ಕಾರದ ಕಡೆಗೆ ಪ್ರೇರೇಪಿಸುತ್ತವೆ. ಭಗವಾನ್ ಶ್ರೀಕೃಷ್ಣನು ಧರ್ಮದ ಮಾರ್ಗವನ್ನು ಅನುಸರಿಸುವ ಮೂಲಕ ಅಂತಿಮವಾಗಿ ಸತ್ಯವನ್ನು ಸಾಧಿಸುವ ಬಗ್ಗೆ ಮಾನವೀಯತೆಯನ್ನು ಪ್ರಬುದ್ಧಗೊಳಿಸಿದರು ಎಂದು ಅವರು ಹೇಳಿದ್ದಾರೆ.

ಶ್ರೀ ಕೃಷ್ಣನು ಸಾಕಾರಗೊಳಿಸಿದ ಶಾಶ್ವತ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಈ ಹಬ್ಬವು ಜನರನ್ನು ಪ್ರೇರೇಪಿಸುತ್ತದೆ ಎಂದು ರಾಷ್ಟ್ರಪತಿಗಳು ಹೇಳಿದ್ದಾರೆ.

************

ಗ್ರೇಟರ್ ಹೈದರಾಬಾದ್ ಮಹಾನಗರ ಪಾಲಿಕೆಯು ೧೫೫ ತೃತೀಯಲಿಂಗಿಗಳಿಗೆ ಸಣ್ಣ ಉದ್ಯಮಗಳನ್ನು ಸ್ಥಾಪಿಸಲು ೧ ಕೋಟಿ ೧೫ ಲಕ್ಷ ರೂಪಾಯಿಗಳ ಅನುದಾನವನ್ನು ವಿತರಿಸಿದೆ. ಈ ತೃತೀಯಲಿಂಗಿಗಳು ಮಹಾನಗರ ಪಾಲಿಕೆಯ ಉಪಕ್ರಮಗಳ ಅಡಿಯಲ್ಲಿ ವಿವಿಧ ವಿಷಯಗಳಲ್ಲಿ ತರಬೇತಿ ಕಾರ್ಯಕ್ರಮಗಳನ್ನು ಪೂರ್ಣಗೊಳಿಸಿದ್ದಾರೆ. ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮದಲ್ಲಿ ಮೇಯರ್ ಜಿ. ವಿಜಯಲಕ್ಷ್ಮಿ, ತೃತೀಯಲಿಂಗಿಗಳಿಗೆ ಚೆಕ್‌ಗಳನ್ನು ವಿತರಿಸಿದರು. ಇದೇ ವೇಳೆ ತರಬೇತಿ ಪೂರ್ಣಗೊಳಿಸಿದ ೫ ತೃತೀಯಲಿಂಗಿಗಳಿಗೆ ಅವರು ಉದ್ಯೋಗ ಪತ್ರಗಳನ್ನು ಹಸ್ತಾಂತರಿಸಿದರು.

************

ನಾಗಾಲ್ಯಾಂಡ್ ರಾಜ್ಯಪಾಲ ಲಾ ಗಣೇಶನ್ ನಿನ್ನೆ ಸಂಜೆ ಚೆನ್ನೈನಲ್ಲಿ ನಿಧನರಾದರು. ಅವರಿಗೆ ೮೦ ವರ್ಷ ವಯಸ್ಸಾಗಿತ್ತು. ಚೆನ್ನೈ ನಗರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು ಕೊನೆಯುಸಿರೆಳೆದರು.ಅವರ ಅಗಲಿಕೆಗೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಸಂತಾಪ ಸೂಚಿದ್ದಾರೆ. ಹಿರಿಯ ಬಿಜೆಪಿ ನಾಯಕ ಲಾ ಗಣೇಶನ್ ಅವರನ್ನು ಫೆಬ್ರವರಿ ೨೦೨೩ ರಲ್ಲಿ ನಾಗಾಲ್ಯಾಂಡ್ ರಾಜ್ಯಪಾಲರನ್ನಾಗಿ ನೇಮಿಸಲಾಯಿತು. ಇದಕ್ಕೂ ಮೊದಲು ಅವರು ಮಣಿಪುರದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದರು ಮತ್ತು ಅಲ್ಪ ಕಾಲ ಪಶ್ಚಿಮ ಬಂಗಾಳದ ಹೆಚ್ಚುವರಿ ಉಸ್ತುವಾರಿಯ ಜವಾಬ್ದಾರಿ ಸಹ ಹೊಂದಿದ್ದರು. ಅವರ ಅಂತ್ಯಕ್ರಿಯೆ ಇಂದು ಸಂಜೆ ೫ ಗಂಟೆಗೆ ಚೆನ್ನೈನಲ್ಲಿ ನಡೆಯಲಿದೆ.

************

ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಮನು ಭಾಕರ್, ಇಂದು ಆರಂಭವಾಗಿ ಆಗಸ್ಟ್ ೩೦ ರಂದು ಕಝಾಕಿಸ್ತಾನದ ಶಿಮ್ಕೆಂಟ್ ಶೂಟಿಂಗ್ ಪ್ಲಾಜಾದಲ್ಲಿ ಮುಕ್ತಾಯಗೊಳ್ಳುವ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್-೨೦೨೫ ರಲ್ಲಿ ಭಾರತದ ಅಭಿಯಾನವನ್ನು ಮುನ್ನಡೆಸಲಿದ್ದಾರೆ.

೨೮ ದೇಶಗಳಿಂದ ೭೩೪ ಶೂಟರ್‌ಗಳು ಇದರಲ್ಲಿ ಸ್ಪರ್ಧಿಸಲಿದ್ದಾರೆ. ಸೀನಿಯರ್ ಮತ್ತು ಜೂನಿಯರ್ ಸ್ಪರ್ಧೆಗಳಲ್ಲಿ ೧೬೪ ಶೂಟರ್‌ಗಳನ್ನು ಒಳಗೊಂಡ ಅತಿದೊಡ್ಡ ತಂಡ ಭಾರತವನ್ನು ಪ್ರತಿನಿಧಿಸಲಿದೆ. ಏಷ್ಯನ್ ಸ್ಪರ್ಧೆಗಾಗಿ ಭಾರತೀಯ ಸೀನಿಯರ್ ಶೂಟಿಂಗ್ ತಂಡವು ೧೫ ಸ್ಪರ್ಧೆಗಳಲ್ಲಿ ಪದಕಗಳಿಗಾಗಿ ಸ್ಪರ್ಧಿಸುವ ೩೫ ಸದಸ್ಯರನ್ನು ಒಳಗೊಂಡಿದೆ. ಭಾರತೀಯ ಶೂಟರ್‌ಗಳು ಜೂನಿಯರ್ ಸ್ಪರ್ಧೆಗಳಲ್ಲಿಯೂ ಸ್ಪರ್ಧಿಸಲಿದ್ದಾರೆ.

ಮನು ಭಾಕರ್ ಮಹಿಳೆಯರ ೧೦ ಮೀಟರ್ ಏರ್ ಪಿಸ್ತೂಲ್ ಮತ್ತು ೨೫ ಮೀಟರ್ ಪಿಸ್ತೂಲ್ ಸ್ಪರ್ಧೆಗಳಲ್ಲಿ ಸ್ಪರ್ಧಿಸಲಿದ್ದಾರೆ. ಒಲಿಂಪಿಯನ್‌ಗಳಾದ ರೈಜಾ ಧಿಲ್ಲೋನ್, ಅಂಜುಮ್ ಮೌದ್ಗಿಲ್, ಐಶ್ವರ್ಯ ಪ್ರತಾಪ್ ಸಿಂಗ್ ತೋಮರ್, ಸಿಫ್ಟ್ ಕೌರ್ ಸಮ್ರಾ, ರುದ್ರಾಂಕ್ಷ್ ಪಾಟೀಲ್ ಮತ್ತು ಕೈನಾನ್ ಚೆನ್ನೈ ಸಹ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

************

ಇಲ್ಲಿಗೆ ನಮ್ಮ ವಾರ್ತಾ ಪ್ರಸಾರ ಮುಕ್ತಾಯವಾಯಿತು.

************